# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1383 (1562)

ಸದಸ್ಯರ ಹೆಸರು : ಡಾ: ಉಮಾಶ್ರೀ (ನಾಮನಿರ್ದೇಶನ ಹೊಂದಿದವರು)

ಉತ್ತರಿಸಬೇಕಾದ ದಿನಾಂಕ : 21-03-2025

ಉತ್ತರಿಸುವ ಸಚಿವರು : ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಬಕವಿ-ಬನಹಟ್ಟಿ ವ್ಯಾಪ್ತಿಯಲ್ಲಿ "ಕನ್ನಡ ಭವನದ" ನಿರ್ಮಾಣ ಕಾಮಗಾರಿಗೆ 60 ಲಕ್ಷ ರೂ.ಗಳ ಅನುದಾನ ಮಂಜೂರಾಗಿದ್ದರೂ ಸಹ 10 ವರ್ಷಗಳಿಂದ ಕಾಮಗಾರಿ ಪೂರ್ಣಗೊಳ್ಳದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಾಗಲಕೋಟೆ ಜಿಲ್ಲೆಯ ರಬಕವಿ ಪಟ್ಟಣದಲ್ಲಿ ಸಾಂಸ್ಕೃತಿಕ ಭವನ ನಿರ್ಮಾಣ ಕಾಮಗಾರಿಯು ನಡೆಯುತ್ತಿರುವುದು ಗಮನಕ್ಕೆ ಬಂದಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಕಸಂವಾ 33 ಕಸಧ 2016, ದಿನಾಂಕ: 14.03.2016ರಲ್ಲಿ ರೂ.60.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿ, ರೂ.42.00 ಲಕ್ಷಗಳನ್ನು ಜಿಲ್ಲಾಧಿಕಾರಿಗಳು, ಬಾಗಲಕೋಟೆ ಜಿಲ್ಲೆ, ಬಾಗಲಕೋಟೆ ಇವರಿಗೆ ಮಂಜೂರು ಮಾಡಲಾಗಿದೆ. (ಅನುಬಂಧದಲ್ಲಿ ಇರಿಸಿದೆ) |
| ಆ) | ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಸದರಿ ಸಾಂಸ್ಕೃತಿಕ ಭವನದ ಕಾಮಗಾರಿಯು ಮುಕ್ತಾಯದ ಹಂತದಲ್ಲಿದ್ದು, ಬಣ್ಣ, ಲೇಪನ ಹಾಗೂ ಕಿಟಕಿಗಳಿಗೆ ಗ್ಲಾಸ್ ಅಳವಡಿಸುವ ಕಾರ್ಯ ನಡೆಯುತ್ತಿದ್ದು, ಬಾಕಿ ಇರುವ ಕಾಮಗಾರಿಗಳನ್ನು ಶೀಘ್ರದಲ್ಲಿಯೇ ಪೂರ್ಣಗೊಳಿಸಲು ಜಿಲ್ಲಾಧಿಕಾರಿಗಳು, ಬಾಗಲಕೋಟೆ, ಇವರಿಗೆ ತಿಳಿಸಲಾಗುವುದು. |
| ಇ) | ಸದರಿ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು. | |

**ಸಂಖ್ಯೆ: ಕಸಂವಾ 51 ಕವಿಸ 2025.**

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.

ಅನುಬಂಧ 5

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬಾಗಲಕೋಟೆ ಜಿಲ್ಲೆ ಜಮಖಂಡಿ ತಾಲ್ಲೂಕಿನ ತೇರದಾಳ ಮತಕ್ಷೇತ್ರದ ರಬಕವಿ ನಗರದಲ್ಲಿ ಸಾಂಸ್ಕೃತಿಕ ಭವನ ನಿರ್ಮಾಣ ಮಾಡುವ ಬಗ್ಗೆ.

**ಓದಲಾಗಿದೆ:** ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಪತ್ರ ಸಂಖ್ಯೆ: ಡಿಕೆಸಿ/25014/43/ಸಿ1/2015, ದಿನಾಂಕ: 16-12-2015.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರವರು ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲ್ಲೂಕಿನ ತೇರದಾಳ ಮತಕ್ಷೇತ್ರದ ರಬಕವಿ ನಗರದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಲು ಸಾಂಸ್ಕೃತಿಕ ಭವನದ ಅವಶ್ಯಕತೆಯಿದ್ದು, ಇದಕ್ಕೆ ಸಂಬಂಧಿಸಿದಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು ಕೆ.ಆರ್.ಐ.ಡಿ.ಎಲ್ ಜಮಖಂಡಿ, ಇವರು ರೂ.60.00 ಲಕ್ಷಗಳ ಅಂದಾಜು ಪಟ್ಟಿಯನ್ನು ತಯಾರಿಸಿ ಸಲ್ಲಿಸಿರುತ್ತಾರೆ. ಅಗತ್ಯ ದಾಖಲೆಗಳಾದ ಅಂದಾಜುಪಟ್ಟಿ, ನೀಲಿನಕ್ಷೆ, ಸ್ಥಳದ ಬಗ್ಗೆ ಜಿಲ್ಲಾಧಿಕಾರಿಗಳು, ಬಾಗಲಕೋಟೆ ಜಿಲ್ಲೆ ರವರು ಸಲ್ಲಿಸಿರುತ್ತಾರೆ. ರೂ.42.80 ಲಕ್ಷಗಳನ್ನು ಜಿಲ್ಲಾಧಿಕಾರಿಗಳು, ಬಾಗಲಕೋಟೆ ಜಿಲ್ಲೆ, ಇವರಿಗೆ ಬಿಡುಗಡೆ ಮಾಡಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

2) ಪ್ರಸ್ತಾವನೆಯನ್ನು ಪರಿಶೀಲಿಸಿ ಸಾಂಸ್ಕೃತಿಕ ಭವನ ನಿರ್ಮಾಣಕ್ಕೆ ಅನುದಾನವನ್ನು ನೀಡಲು ನಿರ್ಣಯಿಸಿ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

***ಸರ್ಕಾರದ ಆದೇಶ ಸಂಖ್ಯೆ: ಕಸಂವಾ 33 ಕಸಧ 2016, ಬೆಂಗಳೂರು ದಿನಾಂಕ:14-03-2016***

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲ್ಲೂಕಿನ ತೇರದಾಳ ಮತಕ್ಷೇತ್ರದ ರಬಕವಿ ನಗರದಲ್ಲಿ ಸಾಂಸ್ಕೃತಿಕ ನಿರ್ಮಾಣ ಮಾಡಲು ರೂ.60.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿ **ರೂ.42.00 ಲಕ್ಷ** (ರೂಪಾಯಿ ನಲವತ್ತೆರಡು ಲಕ್ಷಗಳು ಮಾತ್ರ) ಗಳನ್ನು ಜಿಲ್ಲಾಧಿಕಾರಿಗಳು, ಬಾಗಲಕೋಟೆ ಜಿಲ್ಲೆ, ಇವರಿಗೆ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಇವರ ಮುಖಾಂತರ ಈ ಕೆಳಕಂಡ ಷರತ್ತುಗೊಳಪಟ್ಟು ಬಿಡುಗಡೆ ಮಾಡಲು ಮಂಜೂರಾತಿ ನೀಡಿದೆ.

1. ಕಾಮಗಾರಿ ಮುಗಿದ ಒಂದು ತಿಂಗಳ ಒಳಗೆ ಮಂಜೂರು ಮಾಡಿದ ಹಣ ಸಮರ್ಪಕವಾಗಿ ಬಳಕೆಯಾದ ಬಗ್ಗೆ ಹಣ ಬಳಕೆ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸುವುದು.
2. ಕಾಮಗಾರಿ ಪೂರ್ಣಗೊಂಡ ನಂತರ ಮೌಲ್ಯಮಾಪನ ಪ್ರಮಾಣ ಪತ್ರ ಪಡೆದು ಸಲ್ಲಿಸುವುದು.
3. ಮೇಲ್ಕಂಡಂತೆ ನಿರ್ಮಾಣವಾದ ಸಾಂಸ್ಕೃತಿಕ ಭವನದ ನಿರ್ವಹಣೆಯನ್ನು ಸಂಬಂಧಿಸಿದ ಗ್ರಾಮ ಪಂಚಾಯ್ತಿಯೇ ನೋಡಿಕೊಳ್ಳತಕ್ಕದು. ಇದಕ್ಕಾಗಿ ಸರ್ಕಾರದಿಂದ ಯಾವುದೇ ಅನುದಾನ ಮಂಜೂರು ಮಾಡಲಾಗುವುದಿಲ್ಲ.
4. ಸರ್ಕಾರಿ ಕಾರ್ಯಕ್ರಮಗಳಿಗೆ ಸಾಂಸ್ಕೃತಿಕ ಭವನವನ್ನು ಉಚಿತವಾಗಿ ವರ್ಷದಲ್ಲಿ ಕನಿಷ್ಠ 15 ದಿನ ನೀಡಬೇಕು.
5. ಸಾರ್ವಜನಿಕ ಕಾರ್ಯಕ್ರಮಗಳಿಗೆ ರಿಯಾಯಿತಿ ದರದಲ್ಲಿ ಒದಗಿಸಬೇಕು.
6. ಕಟ್ಟಡದ ಮೇಲೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಹೆಸರನ್ನು ಕಡ್ಡಾಯವಾಗಿ ಹಾಕಬೇಕು.

2) **ಈ ವೆಚ್ಚವನ್ನು 2015-16ನೇ ಸಾಲಿನ ಲೆಕ್ಕಶೀರ್ಷಿಕೆ 2205-00-102-1-31-059 (ಯೋಜನೆ) ಯಡಿ ಭರಿಸತಕ್ಕದ್ದು.**

ಕನ್ನಡ ಮತ್ತು ಸಂಸ್ಕೃತಿ ಇಲಾಖೆ 16 MAR 2016 ಬೆಂಗಳೂರು

..2/-



File No. DKC-25014/43/2015-DKC-RANGAMANDIRA-KANNADA AND CULTURE DEPARTMENT (Computer No. 2021)
Generated from eOffice by RAKESH S, DKC-RANGAMANDIRA (FDA), FIRST DIVISION ASSISTANT, O/O-KANNADA AND CULTURE- on 19/03/2025 0
Scanned with OKEN Scanner

3) ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ/4/ಟಿಎಫ್‌ಪಿ/2015 ದಿನಾಂಕ: 09-10-2015ರಲ್ಲಿ ಇಲಾಖಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Malati 14/3/16

(ಪಿ.ಎಸ್.ಮಾಲತಿ)
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರ)
ಕನ್ನಡ, ಸಂಸ್ಕೃತಿ, ಮತ್ತು ವಾರ್ತಾ ಇಲಾಖೆ

ಗೆ:

1. ಮಹಾಲೇಖಪಾಲರು (ಎ & ಇ), ಕರ್ನಾಟಕ, ಬೆಂಗಳೂರು.
2. ಜಿಲ್ಲಾಧಿಕಾರಿಗಳು, ಬಾಗಲಕೋಟೆ ಜಿಲ್ಲೆ, ಬಾಗಲಕೋಟೆ.
3. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜೆ.ಸಿ.ರಸ್ತೆ, ಬೆಂಗಳೂರು.
4. ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬಾಗಲಕೋಟೆ ಜಿಲ್ಲೆ, ಬಾಗಲಕೋಟೆ.
6. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ/ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಅಧೀನ ಕಾರ್ಯದರ್ಶಿ (ಸಮನ್ವಯ) ಕನ್ನಡ ಮತ್ತು ಸಂಸ್ಕೃತಿ, ಹಾಗೂ ವಾರ್ತಾ ಇಲಾಖೆ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.



File No. DKC-25014/43/2015-DKC-RANGAMANDIRA-KANNADA AND CULTURE DEPARTMENT (Computer No. 2921)
Generated from eOffice by RAKESH S, DKC-RANGAMANDIRA (FDA), FIRST DIVISION ASSISTANT, O/O-KANNADA AND CULTURE- on 19/03/2025 0

Scanned with OKEN Scanner